# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2318 |
| ಸದಸ್ಯರ ಹೆಸರು | ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 27.03.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಹಿಂದುಳಿದ ವರ್ಗಗಳ (OBC) ವಿದ್ಯಾರ್ಥಿಗಳಿಗೆ ನೀಡಲಾಗುವ ಮೆಟ್ರಿಕ್ ಮತ್ತು ಪೂರ್ವ-ಮೆಟ್ರಿಕ್ ನಂತರದ ಶಿಷ್ಯವೇತನ (Scholarship) ಕಳೆದ ಹಲವಾರು ತಿಂಗಳುಗಳಿಂದ ಸಕಾಲದಲ್ಲಿ ವಿತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | -ಇಲ್ಲ- <br> 2025-26ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಡಿ ಪಾವತಿ ಮಾಡಲಾದ ವಿದ್ಯಾರ್ಥಿಗಳ ಸಂಖ್ಯೆ ಮತ್ತು ಪಾವತಿ ಮಾಡಲಾದ ಅನುದಾನದ ವಿವರಗಳನ್ನು **ಅನುಬಂಧ-1 ರಲ್ಲಿ** ಒದಗಿಸಿದೆ. |
| ಆ) | ಶಿಷ್ಯವೇತನ ವಿಳಂಬದಿಂದಾಗಿ ಬಡ ವಿದ್ಯಾರ್ಥಿಗಳು ಕಾಲೇಜು ಶುಲ್ಕ ಪಾವತಿಸಲು ಮತ್ತು ಶೈಕ್ಷಣಿಕ ಚಟುವಟಿಕೆಗಳನ್ನು ಮುಂದುವರೆಸಲು ಅನುಭವಿಸುತ್ತಿರುವ ತೊಂದರೆಗಳನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು; (ಪ್ರಸ್ತುತ ಬಾಕಿ ಇರುವ ಒಟ್ಟು ಶಿಷ್ಯವೇತನದ ಮೊತ್ತದ ವಿವರ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿವೇತನ ಕಾರ್ಯಕ್ರಮಗಳನ್ನು ಇ-ಆಡಳಿತ ಇಲಾಖೆ ಅಭಿವೃದ್ಧಿಪಡಿಸಿ ನಿರ್ವಹಣೆ ಮಾಡುತ್ತಿರುವ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಕಾರ್ಯಕ್ರಮಗಳಡಿ ವಿದ್ಯಾರ್ಥಿಗಳ ಆಧಾರ್ ಸಂಖ್ಯೆಗೆ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿರುತ್ತದೆ. <br> ಆದರೆ ವಿದ್ಯಾರ್ಥಿಗಳ ಶೈಕ್ಷಣಿಕ ದತ್ತಾಂಶದಲ್ಲಿರುವ ಹೆಸರಿಗೂ ಆಧಾರ್‌ನಲ್ಲಿರುವ ಹೆಸರಿಗೂ ವ್ಯತ್ಯಾಸವಿರುತ್ತದೆ, ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಲಿಂಕ್ ಮಾಡಿರುವುದಿಲ್ಲ, ವಿಶ್ವ ವಿದ್ಯಾಲಯಗಳಿಂದ ಶೈಕ್ಷಣಿಕ ದತ್ತಾಂಶ ಹಂಚಿಕೊಂಡಿರುವುದಿಲ್ಲ, ಮತ್ತು ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ 2023-24 ಮತ್ತು 2024-25ನೇ ಸಾಲುಗಳಿಗೆ ಆರ್ಥಿಕ ವರ್ಷ ಮುಕ್ತಾಯವಾದ ನಂತರವೂ ಅರ್ಜಿ ಸ್ವೀಕರಿಸಲಾಗಿರುತ್ತದೆ. ಈ ಎಲ್ಲಾ ಕಾರಣಗಳಿಂದ ಶುಲ್ಕ ಮರುಪಾವತಿ ಪಾವತಿ ಮಾಡಲು ಬಾಕಿ ಇರುತ್ತದೆ. ಸದರಿ ವಿದ್ಯಾರ್ಥಿಗಳು Update ಮಾಡಬೇಕಾದ ದಾಖಲಾತಿಗಳನ್ನು ಕೂಡಲೇ Update ಮಾಡುವಂತೆ |

| | | |
|---|---|---|
| | | ತಿಳಿಸಿದ್ದು, ದಾಖಲಾತಿಗಳನ್ನು Update ಮಾಡಿರುವ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಪಾವತಿಸಲಾಗಿರುತ್ತದೆ. ಕಳೆದ 05 ವರ್ಷಗಳಲ್ಲಿ ಶುಲ್ಕ ಮರುಪಾವತಿ ಕಾರ್ಯಕ್ರಮದಡಿ ಬಾಕಿ ಇರುವ ವಿದ್ಯಾರ್ಥಿಗಳಿಗೆ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದು ಶುಲ್ಕ ಮರುಪಾವತಿ ಮಾಡಲು ಕ್ರಮವಹಿಸಲಾಗಿದ್ದು, ಪ್ರಸ್ತುತ ಹಿಂದಿನ ಸಾಲುಗಳಲ್ಲಿ ಬಾಕಿ ಇದ್ದ 1,54,089 ಅರ್ಹ ವಿದ್ಯಾರ್ಥಿಗಳಿಗೆ ರೂ.174.15 ಕೋಟಿಗಳ ಶುಲ್ಕ ಮರುಪಾವತಿ ಮಾಡಲು ಕ್ರಮವಹಿಸಿದೆ. |
| ಇ) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಮತ್ತು ನಿಗಮಗಳಿಗೆ ವಿವಿಧ ಅಭಿವೃದ್ಧಿ ಯೋಜನೆಗಳಿಗಾಗಿ ಮೀಸಲಿಟ್ಟಿದ್ದ ಅನುದಾನವನ್ನು (OBC Funds) ಬೇರೆ ಯೋಜನೆಗಳಿಗೆ ಅಥವಾ ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸಲಾಗಿದೆಯೇ; ಹಾಗಿದ್ದಲ್ಲಿ ವರ್ಗಾವಣೆಗೊಂಡ ಒಟ್ಟು ಮೊತ್ತವೆಷ್ಟು ಮತ್ತು ಯಾವ ಉದ್ದೇಶಗಳಿಗಾಗಿ ಬಳಸಲಾಗಿದೆ; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಮತ್ತು ನಿಗಮಗಳಿಗೆ ವಿವಿಧ ಅಭಿವೃದ್ಧಿ ಯೋಜನೆಗಳಿಗಾಗಿ ಮೀಸಲಿಟ್ಟಿದ್ದ ಅನುದಾನವನ್ನು ಬೇರೆ ಯೋಜನೆಗಳಿಗೆ ಅಥವಾ ಗ್ಯಾರಂಟಿ ಯೋಜನೆಗಳಿಗೆ ನೀಡಿರುವುದಿಲ್ಲ. |
| ಈ) | ರಾಜ್ಯಾದ್ಯಂತ ಇರುವ ಬಿ.ಸಿ.ಎಂ (BCM) ವಸತಿ ನಿಲಯಗಳಲ್ಲಿ ಕುಡಿಯುವ ನೀರು ಶೌಚಾಲಯ, ಸುಸಜ್ಜಿತ ಕಟ್ಟಡ ಮತ್ತು ಗುಣಮಟ್ಟದ ಆಹಾರದಂತಹ ಮೂಲಸೌಕರ್ಯಗಳ ತೀವ್ರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರಿಗಾಗಿ ವಾಟರ್ ಪ್ಯೂರಿಫೈಯರ್ ವ್ಯವಸ್ಥೆ ಕಲ್ಪಿಸಲಾಗಿದೆ. ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಸಂಖ್ಯಾಬಲಕ್ಕನುಗುಣವಾಗಿ ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. ಮುಂದುವರೆದು, ಸ್ವಂತ ಕಟ್ಟಡ ಲಭ್ಯವಿಲ್ಲದ ವಿದ್ಯಾರ್ಥಿನಿಲಯಗಳನ್ನು ಮಂಜೂರಾತಿ ಸಂಖ್ಯೆಗನುಗುಣವಾಗಿ ಅಗತ್ಯ ಮೂಲಭೂತ ಸೌಕರ್ಯ ಮತ್ತು ಸ್ಥಳಾವಕಾಶ ಲಭ್ಯವಿರುವ ಸೂಕ್ತ ಬಾಡಿಗೆ ಕಟ್ಟಡಗಳನ್ನು ಪಡೆದು ನಿರ್ವಹಿಸಲಾಗುತ್ತಿದೆ. ಶೌಚಾಲಯಗಳ ಸ್ವಚ್ಛತೆಗೆ ನಿಗಧಿಪಡಿಸಿರುವ ಅನುದಾನದಲ್ಲಿ ಗುತ್ತಿಗೆ ಆಧಾರದಲ್ಲಿ ಸಿಬ್ಬಂದಿಯನ್ನು ನಿಯೋಜಿಸಿಕೊಂಡು ಶೌಚಾಲಯಗಳ ಸ್ವಚ್ಛತೆಯನ್ನು ಮಾಡಿಸಲಾಗುತ್ತಿದೆ ಹಾಗೂ ಸರ್ಕಾರದದಿಂದ ನಿಗಧಿಪಡಿಸಿರುವ ಮಾಸಿಕ ಆಹಾರ ವೆಚ್ಚದಂತೆ ವಲಯವಾರು ನಿಗಧಿಪಡಿಸಲಾಗಿರುವ ಮೆನುಚಾರ್ಟ್ ಅನುಸಾರ ಪೌಷ್ಟಿಕ ಮತ್ತು ಗುಣಮಟ್ಟದ ಆಹಾರ ಒದಗಿಸಲಾಗುತ್ತಿದೆ. |

| | | |
|---|---|---|
| ಉ) | ವಸತಿ ನಿಲಯಗಳ ಅಭಿವೃದ್ಧಿಗೆ ಮತ್ತು ಮೂಲಸೌಕರ್ಯ ಸುಧಾರಣೆಗೆ ಕಳೆದ ಒಂದು ವರ್ಷದಲ್ಲಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಹೊಸ ವಸತಿ ನಿಲಯಗಳ ನಿರ್ಮಾಣಕ್ಕಾಗಿ ಸರ್ಕಾರ ಹೊಂದಿರುವ ಭವಿಷ್ಯದ ಯೋಜನೆಗಳೇನು? (ಜಿಲ್ಲಾವಾರು ವಿವರ ನೀಡುವುದು) | 2024-25ನೇ ಸಾಲಿನಲ್ಲಿ ರೂ.39.06 ಕೋಟಿಗಳ ವೆಚ್ಚದಲ್ಲಿ ಇಲಾಖೆಯ ವಿದ್ಯಾರ್ಥಿ ನಿಲಯಗಳಿಗೆ ಅವಶ್ಯವಿರುವ ಮೂಲಭೂತ ಸೌಲಭ್ಯಗಳಾದ ಟೂ-ಟೈಯರ್ ಕಾಟ್, ಕಾಯರ್ ಮ್ಯಾಟ್ರೆಸ್, ಡೈನಿಂಗ್ ಟೇಬಲ್ ಮತ್ತು ಸೋಲಾರ್ ವಾಟರ್ ಹೀಟರ್‌ಗಳನ್ನು ಒದಗಿಸಲಾಗಿರುತ್ತದೆ. 2025-26ನೇ ಸಾಲಿನಲ್ಲಿ ರೂ.50.00 ಕೋಟಿಗಳ ವೆಚ್ಚದಲ್ಲಿ ವಿದ್ಯಾರ್ಥಿ ನಿಲಯಗಳಿಗೆ ಅವಶ್ಯವಿರುವ ಮೂಲಭೂತ ಸೌಲಭ್ಯಗಳಾದ ಟೂ-ಟೈಯರ್ ಕಾಟ್ ಮತ್ತು ಕಾಯರ್ ಮ್ಯಾಟ್ರೆಸ್‌ಗಳನ್ನು ಒದಗಿಸಲಾಗಿರುತ್ತದೆ. ಮುಂದುವರೆದು ಜಿಲ್ಲಾವಲಯದಲ್ಲಿ ವಿದ್ಯಾರ್ಥಿ ನಿಲಯಗಳ ನಿರ್ವಹಣೆಗೆ ಒದಗಿಸಲಾದ ಅನುದಾನದಲ್ಲಿ ಅನುದಾನದ ಲಭ್ಯತೆಯನುಸಾರ ಅತ್ಯಂತ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ವಹಿಸಲಾಗಿರುತ್ತದೆ.<br><br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಒಟ್ಟು2664 ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ ಈಗಾಗಲೇ 1644 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ. 744 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಮತ್ತು 276 ವಿದ್ಯಾರ್ಥಿ ನಿಲಯಗಳು ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.<br><br><u>"ಹೊಸ ಕಟ್ಟಡಗಳ ನಿರ್ಮಾಣ"</u><br><br>ಬಾಡಿಗೆ/ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್ ಕಟ್ಟಡಗಳ ನಿರ್ಮಾಣ ಕಾರ್ಯಕ್ರಮದಡಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಕೈಗೊಳ್ಳಲಾಗುತ್ತಿದೆ.<br><br>2024-25ನೇ ಸಾಲಿನಲ್ಲಿ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ ಲೆಕ್ಕಶೀರ್ಷಿಕೆ 4225-03-277-2-06-ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್ ಕಟ್ಟಡಗಳ ನಿರ್ಮಾಣ ಕಾರ್ಯಕ್ರಮದಡಿ ರೂ.200.00 ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದೆ. |

2024-25ನೇ ಸಾಲಿನಲ್ಲಿ ಕೆಳಕಂಡ ಕಾರ್ಯಕ್ರಮಗಳಡಿ ಒಟ್ಟು 79 ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲಾಗಿರುತ್ತದೆ.

| ಕ್ರ. ಸಂ | ಯೋಜನೆ | ಕಾಮಗಾರಿಗಳ ಸಂಖ್ಯೆ | ಅಂದಾಜು ಮೊತ್ತ (ರೂ.ಕೋಟಿಗಳಲ್ಲಿ) |
|---|---|---|---|
| 1. | ಆಯವ್ಯಯ ಘೋಷಣೆ | 30 | 120.00 |
| 2. | ಆರ್.ಐ.ಡಿ.ಎಫ್ ಟ್ರಾಂಚ್-30 | 15 | 75.00 |
| 3. | ಕೆ.ಕೆ.ಆರ್.ಡಿ.ಬಿ ಸಹಯೋಗದೊಂದಿಗೆ ಕೈಗೊಂಡಿರುವ ಕಾಮಗಾರಿಗಳು | 34 | 156.00 |
| | **ಒಟ್ಟು** | **79** | **351.00** |

2025-26ನೇ ಸಾಲಿನಲ್ಲಿ ಕೆಳಕಂಡ ಕಾರ್ಯಕ್ರಮಗಳಡಿ ಒಟ್ಟು 60 ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲಾಗಿರುತ್ತದೆ.

| ಕ್ರ. ಸಂ | ಯೋಜನೆ | ಕಾಮಗಾರಿಗಳ ಸಂಖ್ಯೆ | ಅಂದಾಜು ಮೊತ್ತ (ರೂ.ಕೋಟಿಗಳಲ್ಲಿ) |
|---|---|---|---|
| 1. | ಆಯವ್ಯಯ ಘೋಷಣೆ | 30 | 150.00 |
| 2. | ಕೆ.ಕೆ.ಆರ್.ಡಿ.ಬಿ ಸಹಯೋಗದೊಂದಿಗೆ ಕೈಗೊಂಡಿರುವ ಕಾಮಗಾರಿಗಳು | 20 | 140.00 |
| 3. | ವಿ.ಟಿ.ಯು ಸಹಯೋಗದೊಂದಿಗೆ ಕೈಗೊಂಡಿರುವ ಕಾಮಗಾರಿಗಳು | 10 | 50.00 |
| | **ಒಟ್ಟು** | **60** | **340.00** |

2026-27ನೇ ಸಾಲಿನ ಆಯವ್ಯಯದಲ್ಲಿ 50 ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣವನ್ನು ತಲಾ ರೂ.5.00 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳಲು ಘೋಷಿಸಲಾಗಿರುತ್ತದೆ. ಅದರನ್ವಯ ಪ್ರಸ್ತುತ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ 415 ನಿವೇಶನಗಳು ಲಭ್ಯವಿದ್ದು, ಲಭ್ಯವಿರುವ ನಿವೇಶನಗಳಲ್ಲಿ ಸ್ವಂತ ಕಟ್ಟಡಗಳ ನಿರ್ಮಾಣವನ್ನು ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಕೈಗೊಳ್ಳಲು ಪರಿಶೀಲಿಸಲಾಗುವುದು.

| | | |
|---|---|---|
| | | **ವಿದ್ಯಾರ್ಥಿನಿಲಯಗಳ ಕಟ್ಟಡ ದುರಸ್ತಿ**<br>2024-25ನೇ ಸಾಲಿನಲ್ಲಿ ಜಿಲ್ಲಾವಲಯ ಯೋಜನೆ ಲೆಕ್ಕಶೀರ್ಷಿಕೆ 2225-00-103-0-40-ಹಿಂದುಳಿದ ವರ್ಗಗಳ ಕಲ್ಯಾಣ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ವಹಣೆ ಕಾರ್ಯಕ್ರಮದಡಿ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ವಹಣೆಗಾಗಿ ರೂ.17.00 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. (ವಿವರಗಳನ್ನು **ಅನುಬಂಧ-2ರಲ್ಲಿ** ನೀಡಲಾಗಿದೆ).<br>2025-26ನೇ ಸಾಲಿನಲ್ಲಿ ಜಿಲ್ಲಾವಲಯ ಯೋಜನೆ ಲೆಕ್ಕಶೀರ್ಷಿಕೆ 2225-00-103-0-40-ಹಿಂದುಳಿದ ವರ್ಗಗಳ ಕಲ್ಯಾಣ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ವಹಣೆ ಕಾರ್ಯಕ್ರಮದಡಿ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ವಹಣೆಗಾಗಿ ರೂ.20.00 ಕೋಟಿಗಳ ಅನುದಾನ ಒದಗಿಸಲಾಗಿರುತ್ತದೆ. (ವಿವರಗಳನ್ನು **ಅನುಬಂಧ-3ರಲ್ಲಿ** ನೀಡಲಾಗಿದೆ).<br>2025-26ನೇ ಸಾಲಿನಲ್ಲಿ ರಾಜ್ಯವಲಯ ಯೋಜನೆಯಡಿ ವಿದ್ಯಾರ್ಥಿ ನಿಲಯಗಳ ಕಟ್ಟಡ ದುರಸ್ತಿ ಕಾಮಗಾರಿಗಾಗಿ ಆಯವ್ಯಯದಲ್ಲಿ ರೂ.25.00 ಕೋಟಿಗಳನ್ನು ಒದಗಿಸಲಾಗಿದ್ದು, ಮೊದಲ ಹಂತದಲ್ಲಿ ಕಲಬುರಗಿ ವಿಭಾಗದ ಜಿಲ್ಲೆಗಳಲ್ಲಿನ ಒಟ್ಟು 51 ವಿದ್ಯಾರ್ಥಿ ನಿಲಯ ಕಟ್ಟಡಗಳ ದುರಸ್ತಿ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖೆಯ ಯೋಜನೆ ಮತ್ತು ರಸ್ತೆಗಳ ಆಸ್ತಿ ನಿರ್ವಹಣಾ ಕೇಂದ್ರದ ಮೂಲಕ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ:ಹಿಂವಕ 302 ಬಿಂಎಂಎಸ್ 2026**

**(ಶಿವರಾಜ್. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಎನ್.ರವಿಕುಮಾರ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2318ಕ್ಕೆ ಅನುಬಂಧ-1**

(ರೂ.ಕೋಟಿಗಳಲ್ಲಿ)

| ಕ್ರ.ಸಂ | ಕಾರ್ಯಕ್ರಮದ ಹೆಸರು | ಪಾವತಿಯಾದ ಅನುದಾನ | ವಿದ್ಯಾರ್ಥಿಗಳ ಸಂಖ್ಯೆ |
|---|---|---|---|
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ | 43.27 | 108197 |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ | 154.60 | 214092 |
| 3 | ವಿದ್ಯಾಸಿರಿ | 66.42 | 44239 |
| 4 | ಶುಲ್ಕ ಮರುಪಾವತಿ | 430.49 | 356834 |
| **ಒಟ್ಟು** | | **694.78** | **723362** |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

– ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಎನ್.ರವಿಕುಮಾರ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:೨೩೧೮ಕ್ಕೆ

ಅನುಬಂಧ-೨

(ರೂ.ಲಕ್ಷಗಳಲ್ಲಿ)

| ಕ್ರ ಸಂ. | ಜಿಲ್ಲೆಯ ಹೆಸರು | ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ವಹಣೆ ೨೨೨೫-೦೦-೧೦೩-೦-೪೦ |
|---|---|---|
| | | Obj-140 |
| ೧ | ಬೆಂಗಳೂರು ನಗರ | 35.88 |
| ೨ | ಬೆಂಗಳೂರು ಗ್ರಾಮೀಣ | 22.16 |
| ೩ | ಚಿತ್ರದುರ್ಗ | 81.25 |
| ೪ | ಕೋಲಾರ | 34.82 |
| ೫ | ಶಿವಮೊಗ್ಗ | 93.92 |
| ೬ | ತುಮಕೂರು | 75.98 |
| ೭ | ದಾವಣಗೆರೆ | 49.60 |
| ೮ | ರಾಮನಗರ | 32.71 |
| ೯ | ಚಿಕ್ಕಬಳ್ಳಾಪುರ | 40.10 |
| ೧೦ | ಮೈಸೂರು | 66.48 |
| ೧೧ | ಚಿಕ್ಕಮಗಳೂರು | 69.65 |
| ೧೨ | ದಕ್ಷಿಣ ಕನ್ನಡ | 45.38 |
| ೧೩ | ಹಾಸನ | 86.53 |
| ೧೪ | ಕೊಡಗು | 29.55 |
| ೧೫ | ಮಂಡ್ಯ | 70.70 |
| ೧೬ | ಚಾಮರಾಜನಗರ | 24.27 |
| ೧೭ | ಉಡುಪಿ | 31.66 |
| ೧೮ | ಬೆಳಗಾವಿ | 119.24 |
| ೧೯ | ವಿಜಯಪುರ | 64.37 |
| ೨೦ | ಧಾರವಾಡ | 40.10 |

(ರೂ.ಲಕ್ಷಗಳಲ್ಲಿ)

| ಕ್ರ ಸಂ. | ಜಿಲ್ಲೆಯ ಹೆಸರು | ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ವಹಣೆ 2225-00-103-0-40 |
|---|---|---|
| | | Obj-140 |
| 21 | ಉತ್ತರ ಕನ್ನಡ | 68.59 |
| 22 | ಬಾಗಲಕೋಟೆ | 47.49 |
| 23 | ಗದಗ | 36.93 |
| 24 | ಹಾವೇರಿ | 50.65 |
| 25 | ಕಲಬುರಗಿ | 89.70 |
| 26 | ಬಳ್ಳಾರಿ | 35.88 |
| 27 | ಬೀದರ್ | 56.98 |
| 28 | ರಾಯಚೂರು | 54.87 |
| 29 | ಯಾದಗಿರಿ | 47.48 |
| 30 | ಕೊಪ್ಪಳ | 54.87 |
| 31 | ವಿಜಯನಗರ | 42.21 |
| 32 | ಒಟ್ಟು ಮೊತ್ತ | 0.00 |
| | ಒಟ್ಟು | 1700.00 |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಎನ್.ರವಿಕುಮಾರ್ ಇವರ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2318ಕ್ಕೆ ಅನುಬಂಧ-3

(ರೂ.ಲಕ್ಷಗಳಲ್ಲಿ)

| ಕ್ರ ಸಂ. | ಜಿಲ್ಲೆಯ ಹೆಸರು | ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ವಹಣೆ 2225-00-103-0-40 |
|---|---|---|
| | | Obj-140 |
| 1 | ಬೆಂಗಳೂರು ನಗರ | 33.27 |
| 2 | ಬೆಂಗಳೂರು ಗ್ರಾಮೀಣ | 27.11 |
| 3 | ಚಿತ್ರದುರ್ಗ | 91.19 |
| 4 | ಕೋಲಾರ | 43.13 |
| 5 | ಶಿವಮೊಗ್ಗ | 105.98 |
| 6 | ತುಮಕೂರು | 86.26 |
| 7 | ದಾವಣಗೆರೆ | 59.15 |
| 8 | ರಾಮನಗರ | 38.20 |
| 9 | ಚಿಕ್ಕಬಳ್ಳಾಪುರ | 50.52 |
| 10 | ಮೈಸೂರು | 73.94 |
| 11 | ಚಿಕ್ಕಮಗಳೂರು | 82.56 |
| 12 | ದಕ್ಷಿಣ ಕನ್ನಡ | 51.76 |
| 13 | ಹಾಸನ | 104.74 |
| 14 | ಕೊಡಗು | 33.27 |
| 15 | ಮಂಡ್ಯ | 86.26 |
| 16 | ಚಾಮರಾಜನಗರ | 34.50 |
| 17 | ಉಡುಪಿ | 36.97 |
| 18 | ಬೆಳಗಾವಿ | 142.95 |
| 19 | ವಿಜಯಪುರ | 80.10 |
| 20 | ಧಾರವಾಡ | 45.59 |
| 21 | ಉತ್ತರ ಕನ್ನಡ | 82.56 |
| 22 | ಬಾಗಲಕೋಟೆ | 56.69 |
| 23 | ಗದಗ | 46.83 |
| 24 | ಹಾವೇರಿ | 59.15 |
| 25 | ಕಲಬುರಗಿ | 114.60 |
| 26 | ಬಳ್ಳಾರಿ | 32.04 |

ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಎನ್.ರವಿಕುಮಾರ್ ಇವರ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2318ಕ್ಕೆ ಅನುಬಂಧ-3

(ರೂ.ಲಕ್ಷಗಳಲ್ಲಿ)

| ಕ್ರ ಸಂ. | ಜಿಲ್ಲೆಯ ಹೆಸರು | ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ವಹಣೆ 2225-00-103-0-40 |
|---|---|---|
| | | Obj-140 |
| 27 | ಬೀದರ್ | 67.78 |
| 28 | ರಾಯಚೂರು | 62.85 |
| 29 | ಯಾದಗಿರಿ | 60.38 |
| 30 | ಕೊಪ್ಪಳ | 61.61 |
| 31 | ವಿಜಯನಗರ | 48.06 |
| 32 | ಒಟ್ಟು ಮೊತ್ತ | 0.00 |
| | ಒಟ್ಟು | 2000.00 |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು